ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಕೈಗಾರಿಕಾ ವಲಯಗಳ ಬಡಾವಣೆ ಅಭಿವೃದ್ಧಿಪಡಿಸುವಲ್ಲಿನ ಟೆಂಡರ್‌ನಲ್ಲಿ ಪಾರದರ್ಶಕತೆ ಪಾಲಿಸದ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

1059 (1237) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧೆಡೆ ಕಳೆದ ಒಂದು ವರ್ಷದಿಂದ ಕೈಗಾರಿಕಾ ವಲಯಗಳ ಬಡಾವಣೆಯನ್ನು ಅಭಿವೃದ್ಧಿಪಡಿಸಲು ಎಷ್ಟು ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದೆ;

(ಆ) ಸದರಿ ಬಡಾವಣೆ ಅಭಿವೃದ್ಧಿಪಡಿಸಲು ಟೆಂಡರ್ ಕರೆದಿರುವ ಪ್ರದೇಶದ ಒಟ್ಟು ವಿಸ್ತೀರ್ಣವೆಷ್ಟು ಹಾಗೂ ಸದರಿ ವಿಸ್ತೀರ್ಣಕ್ಕೆ ಭೂ ಮಾಲೀಕರಿಗೆ ನೀಡಲಾಗಿರುವ ಪರಿಹಾರದ ಮೊತ್ತವೆಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಗುತ್ತಿಗೆದಾರರಿಗೆ ಕಾಮಗಾರಿಗಳನ್ನು ಟೆಂಡರ್ ಮುಖಾಂತರ ಅವಾರ್ಡ್ ಮಾಡುವಾಗ ತಾಂತ್ರಿಕ ಮತ್ತು ಆರ್ಥಿಕ ಬಿಡ್‌ಗಳನ್ನು ಅಂತಿಮಗೊಳಿಸುವಾಗ ನಿಯಮಾನುಸಾರ ಪಾರದರ್ಶಕತೆಯನ್ನು ಪಾಲಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಈ) ಎಷ್ಟು ಕಾಮಗಾರಿಗಳಿಗೆ ಕಾರ್ಯದೇಶ ನೀಡಲಾಗಿದೆ; ಹಾಗೂ ಕಾಮಗಾರಿಗಳ ಪ್ರಗತಿಯ ವಿವರಗಳನ್ನು ಒದಗಿಸುವುದು? (ಪ್ರತ್ಯೇಕವಾಗಿ ವಿವರ ನೀಡುವುದು)